ಕರ್ನಾಟಕ ಸರ್ಕಾರ

ಸಂ: ಕೃಇ 83 ಕೃಕೈಉ 2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:30.09.2020.

## ಸುತ್ತೋಲೆ

ವಿಷಯ:- 2020-21ನೇ ಸಾಲಿನಲ್ಲಿ ಬೆಳೆ ಸಮೀಕ್ಷೆ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ.

*****

2020ನೇ ಸಾಲಿನಲ್ಲಿ ಬೆಳೆ ಸಮೀಕ್ಷೆ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ: ಕೃಇ 83 ಕೃಕೈಉ 2020, ದಿನಾಂಕ 07.08.2020 ರ ಅನುಬಂಧ-4 ರಲ್ಲಿನ ಅನುಷ್ಠಾನದ ವೇಳಾ ಪಟ್ಟಿಯಲ್ಲಿ ಖಾಸಗಿ ನಿವಾಸಿಗಳಿಂದ ಬೆಳೆಸಮೀಕ್ಷೆಯ ಪ್ರಾರಂಭ ಮತ್ತು ಪೂರ್ಣಗೊಳಿಸುವಿಕೆ ಇದರ ಸಮಯಸೂಚಿ ಅಂಕಣದಲ್ಲಿ ಮುಂಗಾರು ಹಂಗಾಮಿಗೆ 24.08.2020 ರಿಂದ 30.09.2020 ಎಂದು ಅವಧಿ ನಿಗದಿಪಡಿಸಲಾಗಿರುತ್ತದೆ.

ಆದರೆ, ಪ್ರಸ್ತುತ ನಿಗದಿಪಡಿಸಿರುವ ಅವಧಿಯಲ್ಲಿ ಮುಂಗಾರು ಹಂಗಾಮಿನ ಬೆಳೆಸಮೀಕ್ಷೆಯನ್ನು ಪೂರ್ಣಗೊಳಿಸಲು ಸಾಧ್ಯವಿಲ್ಲವೆಂದು ತಿಳಿಸುತ್ತಾ, ಸದರಿ ಅವಧಿಯನ್ನು ವಿಸ್ತರಿಸುವಂತೆ ಕೆಲವು ಜಿಲ್ಲೆಗಳ ಜಿಲ್ಲಾಧಿಕಾರಿಗಳು ಕೋರಿರುವುದನ್ನು ಪರಿಗಣಿಸಿ, ಖಾಸಗಿ ನಿವಾಸಿಗಳಿಂದ ಮುಂಗಾರು ಹಂಗಾಮಿನ ಬೆಳೆಸಮೀಕ್ಷೆಯನ್ನು ಕೈಗೊಳ್ಳಲು **ದಿನಾಂಕ:15.10.2020 ರವರೆಗೆ ಅವಧಿಯನ್ನು ವಿಸ್ತರಿಸಿದೆ.**

ಯಾವುದೇ ರೀತಿಯ ತಾಂತ್ರಿಕ ಅಡಚಣೆ ಅಥವಾ ಸಿಬ್ಬಂದಿಗಳ ಕೊರತೆಯ ಕಾರಣಗಳನ್ನು ನೀಡದೆ ಸದರಿ ನಿಗದಿತ ಅವಧಿಯೊಳಗೆ ಖಾಸಗಿ ನಿವಾಸಿಗಳಿಂದ ಮುಂಗಾರು ಹಂಗಾಮಿನ ಬೆಳೆಸಮೀಕ್ಷೆಯನ್ನು

ಪೂರ್ಣಗೊಳಿಸುವಂತೆ ಸೂಚಿಸಿದೆ. ಸದರಿ ನಿಗದಿತ ಅವಧಿಯೊಳಗೆ ಮುಂಗಾರು ಹಂಗಾಮಿನ ಬೆಳೆಸಮೀಕ್ಷೆ ಅಂತಿಮವಾಗದೇ ಇದ್ದಲ್ಲಿ ಸಂಬಂಧಪಟ್ಟವರನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಸಹ ತಿಳಿಸಿದೆ.

P. Sath 30/9/2020
(ಪಿ.ಸತ್ಯಭಾಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ)

30/9

ಇವರಿಗೆ:-

1. ಆಯುಕ್ತರು, ಕೃಷಿ ಇಲಾಖೆ, ಬೆಂಗಳೂರು.
2. ಮುಖ್ಯಸ್ಥರು, ಬೆಳೆ ಸಮೀಕ್ಷೆ ಕಾರ್ಯತಂಡ ಮತ್ತು ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
3. ಎಲ್ಲಾ ಜಿಲ್ಲಾಧಿಕಾರಿಯವರಿಗೆ.
4. ಎಲ್ಲಾ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು ರವರಿಗೆ
5. ಎಲ್ಲಾ ಜಿಲ್ಲಾ ಉಪ ನಿರ್ದೇಶಕರು, ತೋಟಗಾರಿಕೆ ಇಲಾಖೆ ರವರಿಗೆ
6. ಎಲ್ಲಾ ಜಿಲ್ಲಾ ಉಪ ನಿರ್ದೇಶಕರು, ರೇಷ್ಮೆ ಇಲಾಖೆ ರವರಿಗೆ
7. ಎಲ್ಲಾ ಜಿಲ್ಲಾ ಸಾಂಖ್ಯಿಕ ಅಧಿಕಾರಿ ರವರಿಗೆ
8. ಎಲ್ಲಾ ತಹಶೀಲ್ದಾರ್ ರವರಿಗೆ
9. ಶಾಖಾ ರಕ್ಷ ಕಡತ/ ಹೆಚ್ಚುವರಿ ಪ್ರತಿ

(ಕ್ರ.ಸಂ:3 ರಿಂದ 8 ನಿರ್ದೇಶಕರು, ಕೃಷಿ ಇಲಾಖೆ ಇವರ ಮುಖಾಂತರ)

ಪ್ರತಿ ಮಾಹಿತಿಗಾಗಿ:

1. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.

2.ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು

3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕೃಷಿ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.

*****